# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ॥ ಶ್ರೀ ಲಕ್ಷ್ಮೀ ನರಸಿಂಹ ಗ್ರೀನ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ಇವರಿಗೆ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಜೈವಿಕ ಇಂಧನ ಘಟಕವನ್ನು ಸ್ಥಾಪಿಸಲು ನಿರಾಕ್ಷೇಪಣೆ ನೀಡುವ ಬಗ್ಗೆ.

ಓದಲಾಗಿದೆ: ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿ/03/F-200/2013-14/1320 ದಿನಾಂಕ: 5.06.2013.

* * *

ಪ್ರಸ್ತಾವನೆ: –

ಮೇಲೆ ಓದಲಾದ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮೆ॥ ಶ್ರೀ ಲಕ್ಷ್ಮೀ ನರಸಿಂಹ ಗ್ರೀನ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ಇವರಿಗೆ ಬಳ್ಳಾರಿ ಜಿಲ್ಲೆಯ ಶಿರಗುಪ್ಪಾ ತಾಲ್ಲೂಕಿನ ಶಿರುಗುಪ್ಪಾ ಗ್ರಾಮದಲ್ಲಿ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಜೈವಿಕ ವಿದ್ಯುತ್ ಘಟಕವನ್ನು ಸ್ಥಾಪಿಸಲು ನಿರಾಕ್ಷೇಪಣೆಯನ್ನು ನೀಡಬಹುದೆಂದು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ:–

## ಸರ್ಕಾರದ ಆದೇಶ ಸಂಖ್ಯೆ: ಇಎನ್ 172 ಎನ್‌ಸಿಇ 2013, ಬೆಂಗಳೂರು, ದಿನಾಂಕ: 01.07.2013

ಮೆ॥ ಶ್ರೀ ಲಕ್ಷ್ಮೀ ನರಸಿಂಹ ಗ್ರೀನ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ಇವರಿಗೆ ಬಳ್ಳಾರಿ ಜಿಲ್ಲೆಯ ಶಿರಗುಪ್ಪಾ ತಾಲ್ಲೂಕಿನ ಶಿರಗುಪ್ಪಾ ಗ್ರಾಮದಲ್ಲಿ 2.00 ಮೆಗಾ ವ್ಯಾಟ್ ಸಾಮರ್ಥ್ಯದ ಜೈವಿಕ ವಿದ್ಯುತ್ ಘಟಕ ಸ್ಥಾಪಿಸಲು ಈ ಕೆಳಗಿನ ಷರತ್ತಿಗೊಳಪಟ್ಟು ನಿರಾಕ್ಷೇಪಣೆಯನ್ನು ನೀಡಿದೆ :–

1. ಅಭಿವೃದ್ಧಿದಾರರು ಕೆಪಿಟಿಸಿಎಲ್ ನಿಂದ ವಿದ್ಯುತ್ ರವಾನೆ ವ್ಯವಸ್ಥೆ ಸಂಬಂಧ (Evacuation of power) ಪ್ರತ್ಯೇಕ ಅನುಮೋದನೆ ಪಡೆಯತಕ್ಕದ್ದು.
2. ಅಭಿವೃದ್ಧಿದಾರರು ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಸ್ವಂತಕ್ಕೆ ಬಳಕೆ ಮಾಡಿಕೊಳ್ಳಲು/ವಿಲೀಂಗ್ ಆಂಡ್ ಬ್ಯಾಂಕಿಂಗ್ ಮೂಲಕ 3ನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಿದೆ.
3. ಈ ಸ್ಥಾವರಕ್ಕೆ ಸಂಬಂಧಿಸಿದಂತೆ ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ/ಕಂದಾಯ/ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಮತ್ತಿತರ ಇಲಾಖೆಗಳಿಂದ ಅನುಮೋದನೆ ಪಡೆದುಕೊಳ್ಳತಕ್ಕದ್ದು.
4. ಈ ಸ್ಥಾವರ ಅನುಷ್ಠಾನಗೊಳಿಸುವ ಮುನ್ನ ಅಭಿವೃದ್ಧಿದಾರರು ವಿಸ್ತೃತ ಯೋಜನಾ ವರದಿಯನ್ನು (ಡಿ.ಪಿ.ಆರ್.) ತಯಾರಿಸಿ ಕ್ರೆಡಲ್ ಸಂಸ್ಥೆಯಿಂದ ಅನುಮೋದನೆ ಪಡೆಯತಕ್ಕದ್ದು.

---2)

ಸದರಿ ಆದೇಶವನ್ನು ರದ್ದು ಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☎ 22034674.

**ಇವರಿಗೆ:**
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1 ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ ವಿಕಾಸ ಸೌಧ, ಬೆಂಗಳೂರು-1.
2 ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.
6 ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ, ಬಳ್ಳಾರಿ.
7 ಉಪ ಅರಣ್ಯ ಸಂರಕ್ಷಣಾಧಿಕಾರಿ ಬಳ್ಳಾರಿ ಜಿಲ್ಲೆ, ಬಳ್ಳಾರಿ.
8 ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಗುಲ್ಬರ್ಗಾ
9 ಮೆ॥ ಶ್ರೀ ಲಕ್ಷ್ಮೀ ನರಸಿಂಹ ಗ್ರೀನ್ ಎನರ್ಜಿ ಪ್ರೈವೇಟ್ ಲಿಮಿಟೆಡ್, ಬಾಬು ಸಿಂಗ್ ಠಾಕೂರ್ ಪೇಡಾ ಲೈನ್ ಬಜಾರ್, ಧಾರವಾಡ-580001.
10 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
11 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
12 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.